ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 245
ಸದಸ್ಯರ ಹೆಸರು : ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 16.07.2019
ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಹೊಸದಾಗಿ ರಚಿಸಿದ 50 ತಾಲ್ಲೂಕುಗಳಿಗೆ ಪ್ರತಿ ತಾಲ್ಲೂಕು ಪಂಚಾಯಿತಿಗೆ 14 ಹುದ್ದೆಗಳಂತೆ ಒಟ್ಟು 700 ಹುದ್ದೆಗಳನ್ನು ಹೊಸದಾಗಿ ಸೃಷ್ಟಿಸಿರುವುದು ನಿಜವೇ; (ವಿವರ ನೀಡುವುದು)	ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಪ್ರಮುಖ ಯೋಜನೆಗಳನ್ನು ಪರಿಣಾಮಕಾರಿಯಾಗಿ ನಿಗಧಿತ ಅವಧಿಯೊಳಗಾಗಿ ಅನುಷ್ಠಾನಗೊಳಿಸಲು ಅನುವಾಗುವಂತೆ ಹೊಸದಾಗಿ ಸೃಜನೆಯಾದ ಒಟ್ಟು 50 ಹೊಸ ತಾಲ್ಲೂಕುಗಳ ತಾಲ್ಲೂಕು ಪಂಚಾಯಿತಿಗಳಿಗೆ ಪ್ರತಿ ತಾಲ್ಲೂಕಿಗೆ ವಿವಿಧ ವೃಂದಗಳ 14 ಹುದ್ದೆಗಳಂತೆ ಒಟ್ಟು 700 ಹುದ್ದೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 133 ಕೆಎಸ್ಎಸ್ 2017 ದಿನಾಂಕ:12.06.2019 ರಲ್ಲಿ ಸೃಜಿಸಲಾಗಿದೆ.
(ಆ)	ಹೊಸದಾಗಿ ಸೃಷ್ಟಿ ಮಾಡಿದ 700 ಹುದ್ದೆಗಳನ್ನು ತುಂಬಿಕೊಳ್ಳಲು ನೇಮಕಾತಿ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಾಗುವುದು; (ಮಾಹಿತಿ ಒದಗಿಸುವುದು)	ಹೊಸದಾಗಿ ಸೃಜನೆಯಾದ 50 ಹೊಸ ತಾಲ್ಲೂಕುಗಳ ತಾಲ್ಲೂಕು ಪಂಚಾಯಿತಿಗಳಿಗೆ ಹುದ್ದೆಗಳ ಭರ್ತಿ ಪ್ರಕ್ರಿಯೆಯನ್ನು ಈಗಾಗಲೇ ಕಾರ್ಯಗತಗೊಳಿಸಿದೆ. ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದದ ಅಧಿಕಾರಿಗಳಿಗೆ ಕಾರ್ಯನಿರ್ವಾಹಕ ಅಧಿಕಾರಿ ವೃಂದಕ್ಕೆ ಮುಂಬಡ್ತಿ ನೀಡುವ ಮೂಲಕ 13 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.
(ಇ)	ಪ್ರತಿ ತಾಲ್ಲೂಕಿಗೆ ಒಂದರಂತೆ ಒಬ್ಬ ಯೋಜನಾಧಿಕಾರಿ ಹಾಗೂ ಸಹಾಯಕ ನಿರ್ದೇಶಕರು (ನರೇಗಾ) ಹುದ್ದೆಗಳನ್ನು ಸೃಜಿಸಿದ್ದು, ನಿಜವೇ; ಹಾಗಿದ್ದಲ್ಲಿ, ಈ ಹುದ್ದೆಗಳಿಗೆ ವಿದ್ಯಾರ್ಹತೆ ಹಾಗೂ ವೇತನ ಶ್ರೇಣಿಗಳನ್ನು ನಿಗದಿಪಡಿಸಲಾಗಿದೆಯೇ; (ವಿವರ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 133 ಕೆಎಸ್ಎಸ್ 2017 ದಿನಾಂಕ:12.06.2019 ರಲ್ಲಿ ಪ್ರತಿ ತಾಲ್ಲೂಕು ಪಂಚಾಯಿತಿಗೆ ಒಂದರಂತೆ ತಾಲ್ಲೂಕು ಯೋಜನಾಧಿಕಾರಿ ಹಾಗೂ ಸಹಾಯಕ ನಿರ್ದೇಶಕರು (ನರೇಗಾ)ಹುದ್ದೆಯನ್ನು ಸೃಜಿಸಲಾಗಿದೆ. ತಾಲ್ಲೂಕು ಯೋಜನಾಧಿಕಾರಿ ಹುದ್ದೆಯು ಯೋಜನಾ ಇಲಾಖೆಯ ಹುದ್ದೆಯಾಗಿದ್ದು, ಈ ಹುದ್ದೆಗಳನ್ನು ನಿಯೋಜನೆ ಮೂಲಕ ಭರ್ತಿಮಾಡಲಾಗುತ್ತದೆ. ವೇತನ ಶ್ರೇಣಿ ರೂ. 43100–83900 ಹೊಂದಿರುತ್ತದೆ. ಈ ಹುದ್ದೆಗೆ ಗಣಿತ, ಸಾಂಖ್ಯಿಕ, ಆರ್ಥಿಕ, ಆರ್ಥಿಕ ಮತ್ತು ಸಾಂಖ್ಯಿಕ, ಗಣಕಯಂತ್ರ ವಿಷಯಗಳಲ್ಲಿ ಸ್ನಾತಕೋತ್ತರ ಪದವೀಧರರಾಗಿರಬೇಕು. ಸಹಾಯಕ ನಿರ್ದೇಶಕರು (ನರೇಗಾ) ಹುದ್ದೆಯನ್ನು ಅರ್ಹ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಂಬಡ್ತಿಯಿಂದ ತುಂಬಲಾಗುತ್ತದೆ (ವೇತನ ಶ್ರೇಣಿ ರೂ. 43100–83900).
(ಈ)	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಿಂದ ಎಂ.ಎ. (ಆರ್.ಡಿ.ಪಿ.ಆರ್) ಕೋರ್ಸ್‌ಗಳನ್ನು ಅಧ್ಯಯನ ಮಾಡಿದ ವಿದ್ಯಾರ್ಥಿಗಳಿಗೆ ತಾಲ್ಲೂಕು ಯೋಜನಾಧಿಕಾರಿ ಹಾಗೂ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ತುಂಬಿಕೊಳ್ಳುವಾಗ ನೇಮಕಾತಿಯಲ್ಲಿ ಮೀಸಲಾತಿಯನ್ನು ಕಲ್ಪಿಸಲು ಸರ್ಕಾರ ಚಿಂತನೆ ನಡೆಸಿದೆಯೇ?	ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಸಂಖ್ಯೆ:ಗ್ರಾಅಪ 18 ಕೆಎಸ್ಎಸ್ 2019

(ಕೃಷ್ಣ ಭೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು